## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:**- ಶ್ರೀ ಎಂ.ಆರ್.ಪ್ರಕಾಶ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಚಳ್ಳಕೆರೆ, ಇವರ ಅಮಾನತ್ತು ತೆರವುಗೊಳಿಸಿ ಸೇವೆಗೆ ಪುನರ್ ಸ್ಥಾಪಿಸುವ ಬಗ್ಗೆ - ಆದೇಶ.

**ಓದಲಾಗಿದೆ:**-
1. ಪೋಲಿಸ್ ಉಪಾಧೀಕ್ಷಕರು, ಭ್ರಷ್ಟಾಚಾರ ನಿಗ್ರಹ ದಳ, ಚಿತ್ರದುರ್ಗ, ಇವರ ಪತ್ರ ಸಂಖ್ಯೆ: ಎ.ಸಿ.ಬಿ.ಪಿ.ಎಸ್/ಸಿಟಿಎ/ಸಿಆರ್‌ನಂ:01/2016 ದಿನಾಂಕ: 26.09.2016
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ಚಿತ್ರದುರ್ಗ, ಇವರ ಪತ್ರ ಸಂಖ್ಯೆ:ಜಿಪಂ:ಆ(4)ತಾ.ಪಂ./ಸಿಆರ್-327/2016-17, ದಿನಾಂಕ: 27.09.2016.
3. ಅಪರ ಪೋಲಿಸ್ ಮಹಾ ನಿರ್ದೇಶಕರು ಭ್ರಷ್ಟಾಚಾರ ನಿಗ್ರಹದಳ, ಬೆಂಗಳೂರು, ಇವರ ಪತ್ರ ಸಂಖ್ಯೆ: ಎಸಿಬಿ/ಚಿತ್ರದುರ್ಗ/ಮೊ.ಸಂ.01/2016, ದಿನಾಂಕ: 28.10.2016
4. ಸರ್ಕಾರದ ಸಮ ಸಂಖ್ಯೆಯ ಆದೇಶ ದಿನಾಂಕ: 23.11.2016.
5. ಅಧಿಕಾರಿಯ ಮನವಿ ದಿನಾಂಕ: 22.12.2016
6. ಅಪರ ಪೋಲಿಸ್ ಮಹಾ ನಿರ್ದೇಶಕರು, ಬ್ರಷ್ಟಾಚಾರ ನಿಗ್ರಹದಳ, ಬೆಂಗಳೂರು, ಇವರ ಪತ್ರ ದಿನಾಂಕ: 11.04.2017

****

**ಪ್ರಸ್ತಾವನೆ:**

ಚಳ್ಳಕೆರೆ ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಯಲ್ಲಿ ಈ ಹಿಂದೆ ಕರ್ತವ್ಯ ನಿರ್ವಹಿಸುತ್ತಿದ್ದ, ಶ್ರೀ ಎಂ.ಆರ್.ಪ್ರಕಾಶ್, ಇವರು ಚೆಳ್ಳಕೆರೆ ತಾಲ್ಲೂಕಿನ ದೊಡ್ಡಉಳ್ಳಾರ್ತಿ ವ್ಯಾಪ್ತಿಯಲ್ಲಿ ನಡೆಯುವ ಕಾಮಗಾರಿಗಳ ಹೆಸರು, ವಿವರಗಳನ್ನು ನಮೂದಿಸುವ ಸಲುವಾಗಿ 110 ನಾಮಫಲಕಗಳನ್ನು ಸರಬರಾಜು ಮಾಡಿದ ಸಂಬಂಧ, ಸರಬರಾಜುದಾರರಾದ ಶ್ರೀ ಆರ್.ರಾಜು ಬಿನ್ ರಾಮಣ್ಣ, ಇವರಿಗೆ ಹಣ ಬಿಡುಗಡೆ ಮಾಡಲು ಗುತ್ತಿಗೆದಾರರಿಂದ ರೂ.20,000/-ಗಳ ಅಕ್ರಮ ಸಂಭಾವನೆಯನ್ನು ಸ್ವೀಕರಿಸುತ್ತಿದ್ದಾಗ, ಭ್ರಷ್ಟಾಚಾರ ನಿಗ್ರಹದಳ ಚಿತ್ರದುರ್ಗ, ಇವರಿಂದ ಟ್ರ್ಯಾಪ್ ಆಗಿದ್ದ ಹಿನ್ನೆಲೆಯಲ್ಲಿ, ಶ್ರೀ ಎಂ.ಆರ್.ಪ್ರಕಾಶ್, ಇವರನ್ನು ದಿನಾಂಕ: 24.09.2016 ರಿಂದ ನ್ಯಾಯಾಂಗ ಬಂಧನದಲ್ಲಿರಿಸಿ, ದಿನಾಂಕ: 06.10.2016 ರಂದು ನ್ಯಾಯಾಲಯ ಜಾಮೀನಿನ ಮೇಲೆ ಬಿಡುಗಡೆ ಹೊಂದಿರುವುದಾಗಿ, ಪೋಲಿಸ್ ಉಪಾಧೀಕ್ಷಕರು ಭ್ರಷ್ಟಾಚಾರ ನಿಗ್ರಹ ದಳ, ಪೋಲಿಸ್ ಠಾಣೆ, ಚಿತ್ರದುರ್ಗ, ಇವರು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತ್ ಚಿತ್ರದುರ್ಗ, ಮತ್ತು ಅಪರ ಪೋಲಿಸ್ ಮಹಾ ನಿರ್ದೇಶಕರು, ಭ್ರಷ್ಟಾಚಾರ ನಿಗ್ರಹ ದಳ, ಬೆಂಗಳೂರು, ಇವರು ಮೇಲೆ ಓದಲಾದ ಕ್ರಮಾಂಕ 1 ರಿಂದ 3ರ ಪತ್ರಗಳಲ್ಲಿ ತಿಳಿಸಿದ್ದರ ಮೇರೆಗೆ ಸದರಿ ಅಧಿಕಾರಿಯನ್ನು ಮೇಲೆ

ಓದಲಾದ (4)ರ ಸರ್ಕಾರಿ ಆದೇಶದಲ್ಲಿ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 10(1)(ಎ) ರನ್ವಯ ಅಮಾನತ್ತುಗೊಳಿಸಿ ಆದೇಶಿಸಲಾಗಿರುತ್ತದೆ.

ಮೇಲೆ 5 ರಲ್ಲಿ ಓದಲಾದ ಮನವಿಯಲ್ಲಿ, ತಮ್ಮನ್ನು ಸೇವೆಯಿಂದ ಅಮಾನತ್ತುಗೊಳಿಸಿ, ಈಗಾಗಲೇ 3 ತಿಂಗಳು ಮುಕ್ತಾಯಗೊಂಡಿದ್ದು, ತಮ್ಮ ಕುಟುಂಬದ ನಿರ್ವಹಣೆಗೆ ತೊಂದರೆಯಾಗುತ್ತಿದೆ ಎಂದು ತಿಳಿಸುತ್ತಾ, ತಮ್ಮ ವಿರುದ್ಧದ ಶಿಸ್ತು ಪ್ರಕರಣವನ್ನು ಬಾಕಿಯಿರಿಸಿ, ಸೇವೆಗೆ ಮರು ನಿಯೋಜನೆ ಮಾಡುವಂತೆ ಕೋರಿರುತ್ತಾರೆ. ಅಧಿಕಾರಿಯ ಕೋರಿಕೆಯನ್ನು ನಿಯಮಾನುಸಾರ ಪರಿಶೀಲಿಸಲು, ಹಾಗೂ ಸೇವೆಗೆ ಪುನರ್‌ಸ್ಥಾಪಿಸುವ ಬಗ್ಗೆ ಸ್ಪಷ್ಟ ಅಭಿಪ್ರಾಯ/ಸಹಮತಿಯನ್ನು ನೀಡುವಂತೆ ಭ್ರಷ್ಟಾಚಾರ ನಿಗ್ರಹದಳವನ್ನು ಕೋರಲಾಗಿ, ಮೇಲೆ ಓದಲಾದ (6)ರ ಪತ್ರದಲ್ಲಿ, ಪ್ರಕರಣವು ತನಿಖಾ ಹಂತದಲ್ಲಿದ್ದು, ಆರೋಪಿತ ಅಧಿಕಾರಿ, ಶ್ರೀ ಎಂ.ಆರ್.ಪ್ರಕಾಶ್, ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಚಳ್ಳಕೆರೆ, ಚಿತ್ರದುರ್ಗ, ಇವರಿಗ ಇದ್ದ ಸ್ಥಳದಲ್ಲಿಯೇ ಕರ್ತವ್ಯಕ್ಕೆ ಮುಂದುವರೆಸಿದ್ದೇ ಆದಲ್ಲಿ, ಆರೋಪಿತರು ತಮ್ಮ ಹುದ್ದೆಯ ಪ್ರಭಾವವನ್ನು ಬೀರಿ ಸಾಕ್ಷಿಗಳನ್ನು ಹಾಳುಮಾಡುವ ಸಂಭವವಿರುತ್ತದೆ. ಆದುದರಿಂದ ಈ ಪ್ರಕರಣದ ಆರೋಪಿತ ಶ್ರೀ ಎಂ.ಆರ್.ಪ್ರಕಾಶ್, ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಚಳ್ಳಕೆರೆ, ಚಿತ್ರದುರ್ಗ, ಜಿಲ್ಲೆ, ಇವರ ಲೀನ್‌ನ್ನು ಬೇರೆಡೆಗೆ ವರ್ಗಾಯಿಸಿ ಅಮಾನತ್ತನ್ನು ಕೆ.ಸಿ.ಎಸ್.ಆರ್.ನಿಯಮದನ್ವಯ, ಕ್ರಮ ಜರುಗಿಸುವಂತೆ ಭ್ರಷ್ಟಾಚಾರ ನಿಗ್ರಹದಳದ ಪೋಲಿಸ್ ಮಹಾ ನಿರೀಕ್ಷಕರು ಕೋರಿರುತ್ತಾರೆ.

ಈ ಬಗ್ಗೆ ಕೂಲಂಕಷವಾಗಿ ಪರಿಶೀಲಿಸಲಾಗಿದೆ. ಸದರಿ ಅಧಿಕಾರಿಯನ್ನು ಅಮಾನತ್ತುಗೊಳಿಸಿ ಈಗಾಗಲೇ ಸುಮಾರು 06 ತಿಂಗಳುಗಳು ಕಳೆದಿರುವುದರಿಂದ, ಹಾಗೂ ಪ್ರಕರಣವು ತನಿಖಾ ಹಂತದಲ್ಲಿರುವುದರಿಂದ, ಶಿಸ್ತುಕ್ರಮ/ಕ್ರಿಮಿನಲ್ ಮೊಕದ್ದಮೆಯನ್ನು ಬಾಕಿಯಿರಿಸಿ, ಸದರಿ ಅಧಿಕಾರಿಯನ್ನು ಅಮಾನತ್ತಿನಿಂದ ತೆರವುಗೊಳಿಸಿ, ಸೇವೆಗೆ ಪುನರ್‌ಸ್ಥಾಪಿಸಲು ಸರ್ಕಾರವು ತೀರ್ಮಾನಿಸಿದೆ. ಆದುದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 192 ವಿಸೇಬಿ 2016 ಬೆಂಗಳೂರು ದಿನಾಂಕ: 30-05-2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಚಳ್ಳಕೆರೆ ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಯಲ್ಲಿ ಈ ಹಿಂದೆ ಕರ್ತವ್ಯ ನಿರ್ವಹಿಸುತ್ತಿದ್ದ ಶ್ರೀ ಎಂ.ಆರ್.ಪ್ರಕಾಶ್, ಇವರ ವಿರುದ್ಧದ ಶಿಸ್ತುಕ್ರಮ/ಕ್ರಿಮಿನಲ್ ಮೊಕದ್ದಮೆಯನ್ನು ಬಾಕಿಯಿರಿಸಿ, ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಅಮಾನತ್ತಿನಿಂದ ತೆರವುಗೊಳಿಸಿ, ಸೇವೆಗೆ ಪುನರ್‌ಸ್ಥಾಪಿಸಿ,

ಸದರಿಯವರನ್ನು **ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಚನ್ನಗಿರಿ** ಇಲ್ಲಿನ ಖಾಲಿ ಹುದ್ದೆಗೆ ಸ್ಥಳನಿಯುಕ್ತಿಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

(ಎಸ್.ರಂಗನಗೌಡ) 30/05/201
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಬಿ&ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ,**

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿತ್ರದುರ್ಗ/ದಾವಣಗೆರೆ.
3. ಅಪರ ಪೋಲಿಸ್ ಮಹಾನಿರ್ದೇಶಕರು, ಭ್ರಷ್ಟಾಚಾರ ನಿಗ್ರಹದಳ, ನಂ.49, ಖನಿಜ ಭವನ ರೇಸ್‌ಕೋರ್ಸ ರಸ್ತೆ, ಬೆಂಗಳೂರು.
4. ಪೋಲಿಸ್ ಉಪಾಧೀಕ್ಷಕರು, ಭ್ರಷ್ಟಾಚಾರ ನಿಗ್ರಹದಳ ಪೋಲಿಸ್ ಠಾಣೆ, ನಂ. 07, ಪಿಡಬ್ಲ್ಯೂಡಿ ಕ್ವಾಟ್ರಸ್ ವಿ.ಪಿ.ಬಡಾವಣೆ ಚಿತ್ರದುರ್ಗ,
5. ಸಂಬಂಧಿಸಿದ ಅಧಿಕಾರಿಗೆ

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶೀ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ(ಪಂ.ರಾಜ್)/ಜಂಟಿಕಾರ್ಯದರ್ಶಿ (ಆಡಳಿತ) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
3. ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
4. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.